# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2641 |
| ವಿಧಾನಸಭೆ ಸದಸ್ಯರ ಹೆಸರು | : | ಶ್ರೀ ಹೆಚ್.ಎಂ ರಮೇಶ ಗೌಡ |
| ಉತ್ತರಿಸುವ ದಿನಾಂಕ | : | 25-03-2022 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 2021-22ನೇ ಶೈಕ್ಷಣಿಕ ವರ್ಷಕ್ಕೆ ಇಂಜಿನಿಯರಿಂಗ್/ಮೆಡಿಕಲ್ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮ್ಯಾನೇಜ್‌ಮೆಂಟ್ ಕೋಟಾ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ಸ್ಥಗಿತಗೊಳಿಸಿರುವುದಕ್ಕೆ ಕಾರಣವೇನು; | ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯವು 2020-21 ನೇ ಸಾಲಿನಿಂದ 2025-26ನೇ ಸಾಲಿನವರೆಗೆ ಅನ್ವಯವಾಗುವಂತೆ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನದ ಪರಿಷ್ಕೃತ ಮಾರ್ಗಸೂಚಿಯನ್ನು ಹೊರಡಿಸಿರುತ್ತದೆ. ಸದರಿ ಮಾರ್ಗಸೂಚಿಯ ಪ್ಯಾರಾ 5.9 ರಲ್ಲಿ ಮ್ಯಾನೇಜ್‌ಮೆಂಟ್ ಕೋಟಾದಡಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಯೋಜನೆ ಅನ್ವಯವಾಗುವುದಿಲ್ಲವೆಂದು ಈ ಕೆಳಗಿನಂತೆ ಮಾರ್ಗಸೂಚಿಯನ್ನು ಹೊರಡಿಸಿರುತ್ತಾರೆ.<br>***5.9. All seats filled through arbitrary and non-transparent processes (including management quota, NRI quota, spot admission etc.) without following the merit criteria as decided by the State Government are not eligible for these scholarships. The fees claimed against management quota seats, spot admission seat in any institution/ University will not be reimbursed.***<br>ಸದರಿ ಕಾರ್ಯಕ್ರಮವು ಕೇಂದ್ರ ಪುರಸ್ಕೃತ ಕಾರ್ಯಕ್ರಮವಾಗಿದ್ದು, ಶೇಕಡ 60ರಷ್ಟು ಮೊತ್ತವನ್ನು ಕೇಂದ್ರ ಸರ್ಕಾರವೇ ಪಾವತಿಸುತ್ತಿರುವುದರಿಂದಲೂ ಹಾಗೂ ರಾಜ್ಯ ಸರ್ಕಾರ ಉಳಿದ ಶೇಕಡ 40 ರಷ್ಟು ಮಾತ್ರ ಭರಿಸುತ್ತಿರುವುದರಿಂದ, ಕಾರ್ಯಕ್ರಮ ಅನುಷ್ಠಾನದಲ್ಲಿ ರಾಜ್ಯವು ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ನು ಈ ಸಂಬಂಧ ಕಡ್ಡಾಯವಾಗಿ ಪಾಲಿಸಬೇಕಾಗಿರುತ್ತದೆ. ಸದರಿ ಮಾರ್ಗಸೂಚಿಗಳಂತೆ ಯಾವುದೇ ಪ್ರವೇಶ ಪರೀಕ್ಷೆ ಇಲ್ಲದೆ ಹಾಗೂ ಯಾವುದೇ ಕೌನ್ಸಿಲಿಂಗ್ ಇಲ್ಲದೇ ನೇರವಾಗಿ ವಿದ್ಯಾರ್ಥಿಯ ತನ್ನ ಇಚ್ಚೆಯ ಅನುಸಾರವಾಗಿ ಆಡಳಿತ ಮಂಡಳಿ ಕೋಟಾದಡಿ ಪ್ರವೇಶ ಪಡೆದ ವಿದ್ಯಾರ್ಥಿಗಳನ್ನು ವಿದ್ಯಾರ್ಥಿವೇತನಕ್ಕೆ ಪರಿಗಣಿಸಲು ನಿಯಮಾನುಸಾರ ಅವಕಾಶವಿರುವುದಿಲ್ಲ. |
| ಆ) | ಇದರಿಂದ ಸಾವಿರಾರು ಬಡ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯಕ್ಕೆ ತೊಂದರೆಯಾಗುತ್ತಿರುವುದು ನಿಜವಲ್ಲವೇ; | ಹೌದು. |

| | | |
|---|---|---|
| ಇ) | ಈ ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಟಿಯಿಂದ ಅವರಿಗೂ ಉನ್ನತ ವ್ಯಾಸಂಗ ಮಾಡಲು ಶುಲ್ಕ ವಿನಾಯಿತಿಯನ್ನು ಮುಂದುವರೆಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ಇಂಜಿನಿಯರಿಂಗ್/ಮೆಡಿಕಲ್ ಕೋರ್ಸುಗಳಿಗೆ ಪ್ರವೇಶ ಪರೀಕ್ಷೆ/ಕೌನ್ಸಿಲಿಂಗ್ ಮೂಲಕ ಖಾಸಗಿ ಕಾಲೇಜುಗಳಲ್ಲಿ ಆಡಳಿತ ಮಂಡಳಿ ಸೀಟುಗಳಿಗೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಶುಲ್ಕವನ್ನು ಪಾವತಿಸುವ ಸಂಬಂಧ ಪರಿಶೀಲಿಸಿ ಕ್ರಮವಹಿಸಲಾಗುವುದು. |

ಸಕಇ 264 ಪಕವಿ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.